ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಪದವಿ ವ್ಯಾಸಂಗಕ್ಕೆ ದಾಖಲಾತಿ ಕುರಿತು

ಶ್ರೀ ಹೆಚ್.ಎಂ.ರಮೇಶ್‌ಗೌಡ (ವಿಧಾನಸಭೆಯಿಂದಚುನಾಯಿತರಾದವರು):-

116 (121) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸಕ್ತ ಸಾಲಿನಲ್ಲಿ ಪದವಿ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಕಾಲೇಜುಗಳಲ್ಲಿ ಅಂತಿದ ದಿನಾಂಕದ ನಂತರ ವಿದ್ಯಾರ್ಥಿಗಳಿಗೆ ದಾಖಲಾತಿ ಮಾಡಿಕೊಳ್ಳಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದಾಖಲಾತಿ ಕುರಿತಂತೆ ಅಂತಿಮ ದಿನಾಂಕವನ್ನು ನಿಗಧಿಗೊಳಿಸಿದ್ದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ಇಲ್ಲದೇ ವಿಳಂಬವಾಗಿರುವುದರಿಂದ ಅವರ ಭವಿಷ್ಯದ ವಿದ್ಯಾಭ್ಯಾಸ ಒಂದು ವರ್ಷ ವಿನಾಕಾರಣ ಹಾಳಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ದಾಖಲಾತಿ ವಂಚಿತ ವಿದ್ಯಾರ್ಥಿಗಳಿಗೆ ಪುನಃ ಅವಕಾಶ ಕಲ್ಪಿಸಲು ದಾಖಲಾತಿ ದಿನಾಂಕವನ್ನು ವಿಸ್ತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕೋವಿಡ್ ಕಾರಣದಿಂದಾಗಿ ಜನವರಿ 31, 2021ರವರೆಗೆ ದಾಖಲಾತಿಗೆ ಅವಕಾಶ ಕಲ್ಪಿಸಿಕೊಟ್ಟು ವಿದ್ಯಾರ್ಥಿಗಳಿಗೆ ಭವ್ಯ ಭವಿಷ್ಯ ನಿರ್ಮಾಣ ಮಾಡುವಲ್ಲಿ ಅನುಕೂಲ ಮಾಡಿಕೊಡಲಾಗುವುದೇ? (ಮಾಹಿತಿ ನೀಡುವುದು)